**ಕೃಷಿ ವಿಶ್ವ ವಿದ್ಯಾನಿಲಯ**

**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**

**ಜಿ.ಕೆ.ವಿ.ಕೆ., ಬೆಂಗಳೂರು-560065**

*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

**ದಿನಾಂಕ:** 20.02.2024

## ಬೆಂಗಳೂರು ನಗರ ಜಿಲ್ಲೆಗೆ ಸೀಮಿತವಾಗಿದೆ.

### ಕಳೆದ ಐದು ದಿನಗಳ ಹವಾಮಾನ ಸಾರಂಶ

| ನಿಯತಾಂಕಗಳು | 16.02.2024 | 17.02.2024 | 18.02.2024 | 19.02.2024 | 20.02.2024 |
|---|---|---|---|---|---|
| ಮಳೆ (ಮಿ ಮೀ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 31.6 | 31.8 | 31.0 | 31.4 | 30.8 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 19.4 | 18.4 | 18.2 | 18.4 | 18.0 |
| ಮೋಡ ( ಪ್ರಮಾಣ) | 0 | 0 | 0 | 0 | 0 |
| ಆರ್ದ್ರತೆ 7.20 ಬೆ (ಶೇ) | 76 | 81 | 78 | 81 | 79 |
| ಆರ್ದ್ರತೆ 2.20 ಮ (ಶೇ) | 42 | 41 | 40 | 41 | -- |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 9.2 | 9.6 | 9.0 | 9.2 | 9.0 |
| ಗಾಳಿಯ ದಿಕ್ಕು ( ಡಿಗ್ರಿ) | 140 | 140 | 90 | 180 | 140 |

### ಈ ವಾರದ ಹವಾಮಾನ ಮುನ್ಸೂಚನೆ (ಭಾರತೀಯ ಹವಾಮಾನ ಇಲಾಖೆ)

**(ದಿನಾಂಕ 21–02–2024 ರಿಂದ 25–02–2024 ವರೆಗೆ)**

| ನಿಯತಾಂಕಗಳು | 21.02.2024 | 22.02.2024 | 23.02.2024 | 24.02.2024 | 25.02.2024 |
|---|---|---|---|---|---|
| ಮಳೆ (ಮಿ ಮೀ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ. ) | 33 | 32 | 32 | 32 | 32 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 18 | 18 | 18 | 18 | 18 |
| ಮೋಡ ( ಪ್ರಮಾಣ) | 2 | 2 | 2 | 1 | 2 |
| ಆರ್ದ್ರತೆ 7.20 ಬೆ (ಶೇ) | 59 | 59 | 59 | 57 | 57 |
| ಆರ್ದ್ರತೆ 2.20 ಮ (ಶೇ) | 14 | 14 | 14 | 12 | 12 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 5 | 4 | 3 | 5 | 4 |
| ಗಾಳಿಯ ದಿಕ್ಕು ( ಡಿಗ್ರಿ) | 150 | 214 | 261 | 248 | 158 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಮಳೆಯಾಗುವ ಸಾಧ್ಯತೆ ಕಡಿಮೆ ಇದೆ. ದಿನದ ಗರಿಷ್ಠ ಉಷ್ಣಾಂಶ **32.0-33.0$^{o}$C** ಮತ್ತು ಕನಿಷ್ಠ **18.0$^{o}$C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **57-59 %** ಇದ್ದು ಮಧ್ಯಾಹ್ನ **12-14 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **3-5** ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

### ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

| ಬೆಳೆಗಳು | ಬೆಳೆಯ ಹಂತ | ಕೃಷಿ ಸಲಹೆಗಳು |
|---|---|---|
| | | 1. ಕಳೆದ ಮೂರು ತಿಂಗಳಿನಿಂದ ಒಣ ಹವೆ ಇರುವುದರಿಂದ ತೋಟಗಾರಿಕೆ, , ಅರಣ್ಯ ಬೆಳೆಗಳು ಮುಂತಾದ ಮರಗಿಡಗಳಲ್ಲಿ ಗೆದ್ದಲು ಹುಳುಗಳ ಭಾದೆಯು ಹೆಚ್ಚಾಗಿದ್ದು ಇದರ ಹತೋಟಿಗೆ ಆಲ್ಡ್ರಿನ್ ಕೀಟನಾಶಕದಿಂದ ಉಪಚರಿಸಿ ಗೆದ್ದಲು ಹುಳುಗಳನ್ನು ನಿಯಂತ್ರಿಸಿ.<br>2. ರೈತ ಬಾಂದವರು ಹಿಂಗಾರು ಬೆಳೆಗಳನ್ನು ಕಟಾವು ಮಾಡಲು ಸೂಕ್ತ ಕಾಲ.<br>3. ರೈತ ಬಾಂದವರು ಕಟಾವು ಮಾಡಿರುವ ಬೆಳೆಗಳನ್ನು ಸ್ವಚ್ಛ ಮಾಡಿ ಒಕ್ಕಣೆ ಮಾಡಿ, ಬಿಸಿಲಿನಲ್ಲಿ ಒಣಗಿಸಿ ಚೀಲದಲ್ಲಿ ಶೇಖರಿಸಿ.<br>4. ಕಟಾವು ಮಾಡಿದ ಬಿತ್ತನೆ ಬೀಜಗಳನ್ನು ಸರಿಯಾಗಿ ಒಣಗಿಸಬೇಕು. ಅಂದರೆ ಏಕದಳ ಧಾನ್ಯಗಳು |

| | | |
|---|---|---|
| | | ತೇವಾಂಶ ಶೇ. 11 ರಿಂದ 12, ದ್ವಿದಳಧಾನ್ಯಗಳ ತೇವಾಂಶ ಶೇ.9, ಎಣ್ಣೆಕಾಳುಗಳು ಶೇ.8 ಮತ್ತು ತರಕಾರಿ ಬೀಜಗಳು ಶೇ 5 ರಿಂದ 6 ರಷ್ಟಿರಬೇಕು. ಇದರಿಂದ ಹೆಚ್ಚುದಿನ ಕೆಡದಂತೆ ಬೀಜಗಳನ್ನು ಸಂಸ್ಕರಣೆ ಮಾಡಬಹುದು ಜೊತೆಗೆ ಉಗ್ರಾಣ ಕೀಟದ ಬಾಧೆಯನ್ನು ಕಡಿಮೆಮಾಡಬಹುದು. |
| ಮಾವು | ಕಾಯಿ ಬಲಿಯುವ ಹಂತ (ಗೊಟ್ಟಿ ಹಂತ) | 1. ವಿಕೃತ ಹೂ ಗೊಂಚಲು ರೋಗವನ್ನು ಹತೋಟಿ ಮಾಡಲು, ರೋಗ ಬಂದ ರೆಂಬೆಗಳು ಮತ್ತು ಹೂ ಗೊಂಚಲುಗಳನ್ನು ಕತ್ತರಿಸಿ ನಾಶಪಡಿಸಬೇಕು. ಅನಂತರ 1 ಗ್ರಾಂ ಕಾರ್ಬೆಂಡಜಿಂ ಒಂದು ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಮರದ ಅಲ್ಲಾ ಭಾಗಕ್ಕೆ ಸಿಂಪಡಿಸಿ.<br>2. ಶುಷ್ಕ ವಾತಾವರಣವಿರುವುದರಿಂದ (ಕಡಿಮೆ ಆರ್ದ್ರತೆ (64–72 %) ಮತ್ತು ಕಡಿಮೆ ರಾತ್ರಿ ಉಷ್ಣಾಂಶ (11–14 $^{o}$C)) ಮಾವು ಬೆಳೆಯಲ್ಲಿ ಬೂದಿರೋಗದ ಸಂಭವ ಹೆಚ್ಚಾಗಿ ಕಂಡುಬಂದಿರುತ್ತದೆ.<br>3. ಬೂದಿರೋಗದ ಹತೋಟಿಗೆ ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) 3 ಗ್ರಾಂ. ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>4. ಶುಷ್ಕ ವಾತಾವರಣ ಮತ್ತು ನಾಲ್ಕೈದು ದಿನ ಒಣ ಹವೆ ಮುಂದುವರಿಯುವ ಸಂಭವವಿರುವುದರಿಂದ ಒಂದು ಇಲ್ಲ ಎರಡು ಬಾರಿ ಹನಿ ನಿರಾವರಿ ಮೂಲಕ ನೀರಾವರಿಯನ್ನು ಕೊಡಿ ಇದರಿಂದ ಕಾಯಿ ಉದುರುವುದು ಕಡಿಮೆಯಾಗುತ್ತದೆ. |
| **ಪಶುಸಂಗೋಪನೆ** | | 1. ಕೆಲವು ಪ್ರದೇಶಗಳಲ್ಲಿ ಚಳಿಗಾಲದ ತಿಂಗಳುಗಳಲ್ಲಿ ಉಂಟಾಗುವ ಕೊರತೆಯ ಅವಧಿಗೆ ಮೇವನ್ನು ಸಂಗ್ರಹಿಸಲು ಸರಿಯಾದ ಕಾಳಜಿ ವಹಿಸಬೇಕು, ಈ ಸಮಯದಲ್ಲಿ ದೀರ್ಘಕಾಲಿಕ ಹುಲ್ಲುಗಳನ್ನು ಕತ್ತರಿಸಬೇಕು.<br>2. ದನಕರುಗಳ ಕೊಟ್ಟಿಗೆಯನ್ನು ಗಾಳಿ ಸರಾಗವಾಗಿ ಬೀಸುವ ಹಾಗೆ ನೋಡಿಕೊಳ್ಳಿ ಮತ್ತು ಸ್ವಚ್ಚತೆಯನ್ನು ಕಾಪಾಡಿ. |

**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**

**ಮೊಬೈಲ್ ಆಪ್:**

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮುನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.